ಇಲಾಖೆ / ವಿಷಯ: DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER : ದಿನಾಂಕ : DATE : 19/3/2019

# ಜಾಧವ್ ರಾಜೀನಾಮೆ ಅಂಗೀಕಾರ ಆಗಿಲ್ಲ

19/3/19



ಕೋಲಾರ: ಕಲುಬರಗಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲು ಸಿದ್ಧರಾಗುತ್ತಿರುವ ಚಿಂಚೋಳಿ ಶಾಸಕ ಉಮೇಶ್ ಜಾಧವ್ ಅವರು ತಮ್ಮ ಶಾಸಕತ್ವಕ್ಕೆ ನೀಡಿರುವ ರಾಜೀನಾಮೆ ಇನ್ನೂ ಅಂಗೀಕಾರವಾಗಿಲ್ಲ ಎಂದು ಸ್ಪಷ್ಟಪಡಿಸಿರುವ ವಿಧಾನಸಭಾ ಸ್ಪೀಕರ್ ರಮೇಶ್ ಕುಮಾರ್, ಸ್ಪಷ್ಟನಾ ಪತ್ರ ಸಲ್ಲಿಸಲು ಅವರಿಗೆ ತಿಳಿಸಿದ್ದು, ಇನ್ನೂ ಸಲ್ಲಿಸಿಲ್ಲ ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿರುವ ತಮ್ಮ ಸ್ವಗ್ರಾಮ ಶ್ರೀನಿವಾಸಪುರ ತಾಲೂಕಿನ ಅಡಗಲ್ ಗ್ರಾಮದಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಾಧವ್ ಅವರು ಸ್ಪಷ್ಟನಾ ಪತ್ರ ಸಲ್ಲಿಸಿದ ನಂತರ ಅವರ ರಾಜೀನಾಮೆ ಪತ್ರವನ್ನು ಪರಿಶೀಲಿಸಲಾಗುವುದು ಎಂದರು. ಉಮೇಶ್ ಜಾಧವ್ ಅವರು ಪ್ರಮಾಣ ಪತ್ರಗಳನ್ನು ಸಲ್ಲಿಸಿದ್ದಾರೆ. ಆದರೆ ಈ ಮೂರು ಪತ್ರಗಳಲ್ಲಿ ಸಾಮ್ಯತೆ ಇಲ್ಲದಿರುವುದರಿಂದ ಸ್ಪಷ್ಟನೆ ಕೇಳಲಾಗಿದೆ. ಈ ಸ್ಪಷ್ಟನೆ ಕೊಡುವ ಪತ್ರ ಇನ್ನೂ ನಮಗೆ ಬಂದಿಲ್ಲ, ಅದು ಬಂದ ನಂತರ ಅವರ ರಾಜೀನಾಮೆಯ ಅಂಗೀಕಾರದ ಬಗ್ಗೆ ಪರಿಶೀಲನೆ ನಡೆಸಿ ಕಾನೂನಿನ ಪ್ರಕಾರ ನಡೆದುಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

2